# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 577 |
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | ಶ್ರೀ ಮರಿತಿಬ್ಬೇಗೌಡ |
| ಉತ್ತರಿಸಬೇಕಾದ ದಿನಾಂಕ | 08.12.2023 |
| ಉತ್ತರಿಸುವ ಸಚಿವರು | ಮಾನ್ಯ ಸಮಾಜ ಕಲ್ಯಾಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ವಸತಿ ಶಿಕ್ಷಣ ಸಂಸ್ಥೆಗಳ ಅಡಿಯಲ್ಲಿ ಬರುವ (ಕ್ರೈಸ್) ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ ಬೋಧಕೇತರರಿಗೆ ವೃಂದ ಮತ್ತು ನೇಮಕಾತಿ ನಿಯಮಗಳ ಪ್ರಕಾರ ಸರ್ಕಾರಿ ನೌಕರರಿಗೆ ನೀಡಲಾಗುವ ಡಿ.ಸಿ.ಆರ್.ಜಿ. ಜ್ಯೋತಿ ಸಂಜೀವಿನಿ ಮುಂತಾದ ಸೌಲಭ್ಯಗಳನ್ನು ಒದಗಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಪರಿಶಿಷ್ಟ ಜಾತಿ- 503, ಪರಿಶಿಷ್ಟ ವರ್ಗ-156 ಮತ್ತು ಹಿಂದುಳಿದ ವರ್ಗ-174 ಒಟ್ಟಾರೆ 833 ವಸತಿ ಶಾಲೆ/ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ. ಸದರಿ ವಸತಿ ಶಾಲೆಗಳಲ್ಲಿ 6403 ಖಾಯಂ ಬೋಧಕ/ಬೋಧಕೇತರ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ.<br>**ಡಿ. ಸಿ. ಆರ್. ಜಿ :**<br>6ನೇ ವೇತನ ಆಯೋಗದ ಶಿಫಾರಸ್ಸಿನನ್ವಯ ದಿನಾಂಕ: 01-04-2006 ರಂದು ಮತ್ತು ನಂತರ ಸರ್ಕಾರಿ ಸೇವೆಗೆ ನೇಮಕ ಹೊಂದಿರುವ ಹೊಸ ವ್ಯಾಖ್ಯಾನಿಸಿದ ಅಂಶದಾಯಿ ಪಿಂಚಣಿ ಕೊಡುಗೆ ಯೋಜನೆಗೆ ಒಳಪಡುವ ಸರ್ಕಾರಿ ನೌಕರರಿಗೆ ಈ ಹಿಂದೆ ಇದ್ದ ಇಡಿಗಂಟಿನ ಪರಿಹಾರ ಸೌಲಭ್ಯವನ್ನು ಹಿಂಪಡೆದು, ಸರ್ಕಾರ ಆದೇಶ ಸಂಖ್ಯೆ:ಆಇ 34 ಪಿಇಎನ್ 2018 ದಿನಾಂಕ: 23.06.2018 ರ ಮೂಲಕ ನಿವೃತ್ತಿ ಮತ್ತು ಮರಣ ಉಪದಾನ ಹಾಗೂ ಕುಟುಂಬ ಪಿಂಚಣಿ ಸೌಲಭ್ಯವನ್ನು ಜಾರಿಗೊಳಿಸಲಾಗಿದೆ. ಈ ಆದೇಶವು ನೂತನ ಪಿಂಚಣಿ ಯೋಜನೆಗೆ ಒಳಪಡುವ ಸರ್ಕಾರಿ ನೌಕರರಿಗೆ ಎಂದು ಸ್ಪಷ್ಟವಾಗಿ ತಿಳಿಸಿರುವುದರಿಂದ ಸದರಿ ಸೌಲಭ್ಯವು ಸರ್ಕಾರದ ನಿಗಮ ಮಂಡಳಿಗಳು, ಸ್ವಾಯತ್ತ ಸಂಸ್ಥೆಗಳು ಹಾಗೂ ಸರ್ಕಾರದ ಅಧೀನದ ಇನ್ನಿತರ ಯಾವುದೇ ಸಂಘ ಸಂಸ್ಥೆಗಳ ನೌಕರರಿಗೆ ಅನ್ವಯವಾಗುವುದಿಲ್ಲ. ಆದುದರಿಂದ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ನೌಕರರಿಗೆ ನಿವೃತ್ತಿ ಮತ್ತು ಮರಣ ಉಪದಾನ ಹಾಗೂ ಕುಟುಂಬ ಪಿಂಚಣಿ ಸೌಲಭ್ಯ ವಿಸ್ತರಿಸಲು ಸಾಧ್ಯವಿಲ್ಲವೆಂದು ಆರ್ಥಿಕ ಇಲಾಖೆ ಹಿಂಬರಹ ನೀಡಿರುತ್ತದೆ.<br>ಮುಂದುವರೆದು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ನೌಕರರಿಗೆ DCRG ಸೌಲಭ್ಯವನ್ನು ವಿಸ್ತರಿಸುವ ಪ್ರಸ್ತಾವನೆಯು ಆರ್ಥಿಕ ಇಲಾಖೆಯಲ್ಲಿ ಪರಿಶೀಲನೆಯಲ್ಲಿದ್ದು, ಅಂತಿಮ ನಿರ್ಣಯವಾಗುವವರೆಗೆ ಸಂಘದ ಅಧೀನದ ಸೇವಾನಿರತ ಖಾಯಂ ಸಿಬ್ಬಂದಿಗಳು ಆಕಾಲಿಕ ಮರಣ ಹೊಂದಿದ್ದಲ್ಲಿ |
| ಆ) | ಹಾಗಿದ್ದಲ್ಲಿ ಸದರಿ ಸೌಲಭ್ಯ ಕಲ್ಪಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | |

| | | |
|---|---|---|
| | | ಅಂತಹ ಸಿಬ್ಬಂದಿಗಳ ಅವಲಂಬಿತ ಕುಟುಂಬದವರಿಗೆ ರೂ.5.00/- ಲಕ್ಷಗಳ ಪರಿಹಾರ ಧನವನ್ನು ಪಾವತಿಸಲು ಆದೇಶಿಸಲಾಗಿರುತ್ತದೆ.<br>**ಜ್ಯೋತಿ ಸಂಜೀವಿನಿ :**<br>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿನ ಅಧೀನದ ವಸತಿ ಶಾಲೆ/ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಜ್ಯೋತಿ ಸಂಜೀವಿನಿ ಯೋಜನೆಯನ್ನು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ವತಿಯಿಂದ ಅನುಷ್ಠಾನಗೊಳಿಸಲು ವಾರ್ಷಿಕವಾಗಿ ಅಂದಾಜು ರೂ.4.55 ಕೋಟಿ ವೆಚ್ಚದಲ್ಲಿ ಭರಿಸುವ ಸಂಬಂಧ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿದ್ದು, ಸದರಿ ಪ್ರಸ್ತಾವನೆಯು ಪ್ರಸ್ತುತ ಆರ್ಥಿಕ ಇಲಾಖೆಯಲ್ಲಿ ಪರಿಶೀಲನೆಯಲ್ಲಿರುತ್ತದೆ. |
| **ಇ)** | ಪದವಿ ಪೂರ್ವ ಕಾಲೇಜುಗಳಲ್ಲಿ ಹಿಂದಿ ಉಪನ್ಯಾಸಕರ, ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳನ್ನು ಎಂದಿನಿಂದ ಸೃಜಿಸಲಾಗುವುದು; | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿನ ಮೊರಾರ್ಜಿ ದೇಸಾಯಿ ಪದವಿ ಪೂರ್ವ ಕಾಲೇಜುಗಳಲ್ಲಿ ವಿಜ್ಞಾನ (Science Method) ತರಗತಿಗಳನ್ನು ನಡೆಸಲಾಗುತ್ತಿದ್ದು ಸಂಘದ ವಿಜ್ಞಾನ ಕಾಲೇಜುಗಳಿಗೆ ಕನ್ನಡ ಮತ್ತು ಆಂಗ್ಲಭಾಷಾ ವಿಷಯವನ್ನು ನಿಗಧಿಪಡಿಸಿ ಹುದ್ದೆಗಳನ್ನು ಮಂಜೂರು ಮಾಡಲಾಗಿರುತ್ತದೆ. ಹಿಂದಿ ವಿಷಯವನ್ನು ಭಾಷೆಯನ್ನಾಗಿ ಪರಿಗಣಿಸಿರುವುದಿಲ್ಲ. ಆದ್ದರಿಂದ ಹಿಂದಿ ಭಾಷಾ ಉಪನ್ಯಾಸಕರ ಹುದ್ದೆ ಮಂಜೂರಾಗಿರುವುದಿಲ್ಲ.<br>ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳು ಮಂಜೂರಾಗಿರುವುದಿಲ್ಲ ಸಂಘದ ಪದವಿ ಪೂರ್ವ ಕಾಲೇಜುಗಳಿಗೂ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳನ್ನು ಮಂಜೂರು ಮಾಡಿರುವುದಿಲ್ಲ. |
| **ಈ)** | ವಸತಿ ಶಿಕ್ಷಣ ನಿರ್ದೇಶನಾಲಯವನ್ನು ಸ್ಥಾಪಿಸಲು ಸರ್ಕಾರ ಚಿಂತಿಸಿದೆಯೇ: | ಕರ್ನಾಟಕ ರಾಜ್ಯದ ಗ್ರಾಮೀಣ ಪ್ರತಿಭಾನ್ವಿತ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ, ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಗುಣಮಟ್ಟ ಶಿಕ್ಷಣ ನೀಡಲು ಜವಹಾರ್ ನವೋದಯ ವಸತಿ ಶಾಲೆಗಳ ಮಾದರಿಯಲ್ಲಿ ವಸತಿ ಶಾಲೆಗಳನ್ನು ಪ್ರಾರಂಭಿಸಲು ಹಾಗೂ ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಅಲ್ಪಸಂಖ್ಯಾತರ ಇಲಾಖೆಗಳ ಅಧೀನದ ವಸತಿ ಶಾಲೆಗಳನ್ನು ಒಂದೇ ಸೂರಿನಡಿ ನಿರ್ವಹಿಸಲು ಸರ್ಕಾರದ ಆದೇಶ ಸಂಖ್ಯೆ: ಸಕಇ 532 ಎಸ್ ಇ ಡಬ್ಲ್ಯೂ 96, ದಿನಾಂಕ:06-10-1999 ರಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವನ್ನು ಸ್ಥಾಪಿಸಿ ಆದೇಶಿಸಿದೆ.<br>ಪ್ರಾರಂಭದಲ್ಲಿ ವಿವಿಧ ಇಲಾಖೆಗಳ ಒಟ್ಟು 79 ವಸತಿ |
| **ಉ)** | ಹಾಗಿದ್ದಲ್ಲಿ ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | |

| | | |
|---|---|---|
| | | ಶಾಲೆಗಳು ಸಂಘಕ್ಕೆ ವರ್ಗಾವಣೆಯಾಗಿದ್ದು, ವಸತಿ ಶಾಲೆ/ಕಾಲೇಜುಗಳು ಮಂಜೂರಾಗಿದ್ದು, ಪ್ರಸ್ತುತ ಪರಿಶಿಷ್ಟ ಜಾತಿ-503, ಪರಿಶಿಷ್ಟ ವರ್ಗ-156 ಮತ್ತು ಹಿಂದುಳಿದ ವರ್ಗ-174 ಒಟ್ಟಾರೆ 833 ವಸತಿ ಶಾಲೆ/ಕಾಲೇಜುಗಳು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿವೆ. ಸದರಿ ವಸತಿ ಶಾಲೆ/ಕಾಲೇಜುಗಳಲ್ಲಿ 2.16 ಲಕ್ಷ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ.<br><br>ವಸತಿ ಶಾಲೆ/ಕಾಲೇಜುಗಳ ಸಮರ್ಪಕ ನಿರ್ವಹಣೆ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಎಲ್ಲಾ ರೀತಿಯ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸಂಘವು ಶ್ರಮಿಸುತ್ತಿದೆ. ಪ್ರಾರಂಭದಿಂದಲೂ ಪ್ರಸ್ತುತ ಶೈಕ್ಷಣಿಕ ಸಾಲಿನವರೆವಿಗೂ ಎಸ್.ಎಸ್.ಎಲ್.ಸಿ ಹಾಗೂ ದ್ವಿತೀಯ ಪಿ.ಯು.ಸಿ ಫಲಿತಾಂಶವು ಅತ್ಯುತ್ತಮವಾಗಿ ಬರುತ್ತಿದ್ದು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವು ಒಂದು ಬೃಹತ್ ಸಂಸ್ಥೆಯಾಗಿದ್ದು, ಸಾರ್ವಜನಿಕ ಸಂಪರ್ಕಕ್ಕೆ ಮತ್ತು ವಿದ್ಯಾರ್ಥಿಗಳ ಗುಣಮಟ್ಟದ ವಿದ್ಯಾಭ್ಯಾಸಕ್ಕೆ ಉತ್ತಮ ವಾತಾವರಣ ಕಲ್ಪಿಸಿಕೊಡಲಾಗಿದೆ.<br><br>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವನ್ನು ನಿರ್ದೇಶನಾಲಯವನ್ನಾಗಿ ಮಾರ್ಪಡಿಸುವ ಪ್ರಸ್ತಾವನೆ ಸ್ವೀಕೃತವಾಗಿದ್ದು, ಪ್ರಸ್ತುತ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ. |
| **ಊ)** | ವಸತಿ ಶಾಲೆಗಳಲ್ಲಿನ ವಿದ್ಯಾರ್ಥಿಗಳಿಗೆ ನೋಟ್ ಪುಸ್ತಕ, ಸಮವಸ್ತ್ರ, ಶೂ, ಸಾಕ್ಸ್, ಪೀಠೋಪಕರಣ, ಕಂಪ್ಯೂಟರ್ ಪ್ರಯೋಗಾಲಯ ಮುಂತಾದ ಸೌಲಭ್ಯಗಳನ್ನು ಸಕಾಲದಲ್ಲಿ ವಿತರಿಸದಿರಲು ಹಾಗೂ ಮೂಲಭೂತ ಸೌಲಭ್ಯಗಳನ್ನು ಒದಗಿಸದಿರಲು ಕಾರಣಗಳೇನು? (ವಿವರನೀಡುವುದು) | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳಲ್ಲಿನ ವಿದ್ಯಾರ್ಥಿಗಳಿಗೆ ನೋಟ್ ಪುಸ್ತಕ, ಸಮವಸ್ತ್ರ, ಶೂ, ಸಾಕ್ಸ್, ಪೀಠೋಪಕರಣಗಳನ್ನು ಒದಗಿಸಲಾಗಿದೆ. ಕಂಪ್ಯೂಟರ್ ಪ್ರಯೋಗಾಲಯ ಮುಂತಾದ ಸೌಲಭ್ಯಗಳನ್ನು ಒದಗಿಸಲು ಪ್ರತ್ಯೇಕವಾಗಿ ಯಾವುದೇ ಅನುದಾನ ನಿಗಧಿಯಾಗಿರುವುದಿಲ್ಲ. 2024-25 ನೇ ಸಾಲಿನ ಆಯವ್ಯಯದಲ್ಲಿ ಅನುದಾನ ಪ್ರಸ್ತಾಪಿಸಿ, ಅನುದಾನ ಲಭ್ಯತೆ ಆಧಾರದ ಮೇಲೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕ್ರಮವಹಿಸಲಾಗುವುದು. |

ಸಕಇ-ಎಂಡಿಎಸ್/222/2023

(ಡಾ.ಹೆಚ್.ಸಿ. ಮಹದೇವಪ್ಪ )
ಸಮಾಜ ಕಲ್ಯಾಣ ಸಚಿವರು